**All India Radio: Bangalore**
**Regional Bulletin In Kannada**
**13.11.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.11.2025 / 2.30 p.m.**
**<><><><>**
**ಮುಖ್ಯಾಂಶಗಳು**

**೧. ಮೇಕೆದಾಟು ಯೋಜನೆಗೆ ವಿರೋಧ; ತಮಿಳುನಾಡು ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್**

**೨. ಮೇಕೆದಾಟು ವಿಚಾರದಲ್ಲಿ ರಾಜ್ಯಕ್ಕೆ ನ್ಯಾಯಾಲಯದಲ್ಲಿ ಗೆಲುವು- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಮತ**

**೩. ಸಾಗರ ಕ್ಷೇತ್ರದಲ್ಲಿ ೧೦ ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ- ಕೇಂದ್ರ ಸಚಿವ ಸರ್ಬಾನಂದ ಸೋನಾವಾಲ್**

**೪. ರಾಜ್ಯದ ೪ ರೈಲು ನಿಲ್ದಾಣಗಳಿಗೆ ಸಂತರ ಹೆಸರಿಡುವಂತೆ ಕೇಂದ್ರ ಗೃಹ ಇಲಾಖೆಗೆ ಸಚಿವ ಎಂ.ಬಿ.ಪಾಟೀಲ್ ಪತ್ರ**

**೫. ದಾವಣಗೆರೆಯಲ್ಲಿ ಹೂಡಿಕೆದಾರರ ಸಭೆ; ೧೦ ಕ್ಕೂ ಹೆಚ್ಚು ಕಂಪನಿಗಳಿಂದ ಬಂಡವಾಳ ಹೂಡಲು ನಿರ್ಧಾರ**

**<><><><>**

ಮೇಕೆದಾಟು ಯೋಜನೆಗೆ ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮ ಪ್ರಶ್ನಿಸಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಪೀಠ ಇಂದು ವಜಾಗೊಳಿಸಿದೆ. ವಿಚಾರಣೆ ನಡೆಸಿದ ನ್ಯಾಯಾಲಯ, ಈ ಯೋಜನೆ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗದಂತಹ ಪರಿಣಿತ ಸಂಸ್ಥೆಗಳ ಪರಿಶೀಲನೆಯಲ್ಲಿದೆ. ಹೀಗಾಗಿ ಈ ವಿಚಾರದಲ್ಲಿ ಮಧ್ಯಪ್ರವೇಶ ಮಾಡುವುದಿಲ್ಲ ಎಂದು ತಿಳಿಸಿದೆ. ಈ ತೀರ್ಪಿನಿಂದ ಮೇಕೆದಾಟು ಯೋಜನೆ ವಿಚಾರದಲ್ಲಿ ರಾಜ್ಯ ಸರ್ಕಾರಕ್ಕೆ ದೊಡ್ಡ ಗೆಲುವು ದೊರೆತಿದೆ. ಕಳೆದ ಏಳು ವರ್ಷಗಳಿಂದ ತಮಿಳುನಾಡು ಈ ಯೋಜನೆಗೆ ಅಡ್ಡಗಾಲು ಹಾಕುತ್ತಾ ಬಂದಿದೆ. ಸುಪ್ರೀಂಕೋರ್ಟ್ ಅರ್ಜಿ ವಜಾಗೊಳಿಸಿದ ಹಿನ್ನೆಲೆಯಲ್ಲಿ ಯೋಜನೆ ಮುಂದುವರಿಸಲು ರಾಜ್ಯ ಸರ್ಕಾರಕ್ಕೆ ಹಸಿರು ನಿಶಾನೆ ದೊರೆತಿದೆ.

**<><><><>**

ಮೇಕೆದಾಟು ವಿರುದ್ಧದ ತಮಿಳುನಾಡು ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿರುವುದು, ನ್ಯಾಯ ಪೀಠದಿಂದ ರಾಜ್ಯಕ್ಕೆ ಸಿಕ್ಕ ನ್ಯಾಯ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಯಾವುದೇ ರೀತಿಯ ಹಿನ್ನಡೆಯಲ್ಲ. ಬದಲಿಗೆ ನ್ಯಾಯ ಪೀಠದಿಂದ ದೊರೆತ ನ್ಯಾಯ ಎಂದು ಬಣ್ಣಿಸಿದ್ದಾರೆ. ಮೇಕೆದಾಟು, 'ನಮ್ಮ ನೀರು, ನಮ್ಮ ಹಕ್ಕು' ಯೋಜನೆ. ಈ ಯೋಜನೆಯಿಂದ ತಮಿಳುನಾಡಿಗೇ ಹೆಚ್ಚು ಲಾಭವಾಗಲಿದೆ. ರಾಜ್ಯದ ಜನರ ಪ್ರಾರ್ಥನೆ, ಜನರ ಕಷ್ಟಕ್ಕೆ ನ್ಯಾಯಾಲಯ ಸ್ಪಂದಿಸಿದೆ" ಎಂದು ಅಭಿಪ್ರಾಯಪಟ್ಟಿದ್ದಾರೆ.

**<><><><>**

ಸಾಗರ ಕ್ಷೇತ್ರದಲ್ಲಿ ೧೦ ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದು ಕೇಂದ್ರದ ಬಂದರು, ಹಡಗು ಮತ್ತು ಜಲಸಾರಿಗೆ ಸಚಿವ ಸರ್ಬಾನಂದ ಸೋನಾವಾಲ್ ತಿಳಿಸಿದ್ದಾರೆ. ಮಂಗಳೂರಿನ ಮರೈನ್ ಕಾಲೇಜ್ ಅಂಡ್

ಟೆಕ್ನಾಲಜಿ ಸಂಸ್ಥೆಯ ನವೀಕೃತ ಕ್ಯಾಂಪಸ್ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈ ಕ್ಷೇತ್ರದಲ್ಲಿ ವಿಫುಲ ಉದ್ಯೋಗಾವಕಾಶವಿದ್ದು, ತಮ್ಮನ್ನು ತೊಡಗಿಸುವ ವಿದ್ಯಾರ್ಥಿಗಳು ನೈಪುಣ್ಯತೆ ಹೊಂದಿರಬೇಕು ಎಂದು ಕರೆ ನೀಡಿದ್ದಾರೆ. ಸಾಗರ ಕ್ಷೇತ್ರಕ್ಕೆ ಕೇಂದ್ರ ಸರ್ಕಾರ ೮೮ ಲಕ್ಷ ಕೋಟಿ ಬಂಡವಾಳ ಹೂಡಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ: ಸರ್ಬಾನಂದ ಸೋನಾವಾಲ್ ( ೨೮  ಸೆಕೆಂಡ್ಸ್)**

ನವ ಮಂಗಳೂರು ಬಂದರು ಪ್ರಾಧಿಕಾರದ ೫೦ನೇಯ ವರ್ಷಾಚರಣೆಯ ಹಿನ್ನೆಲೆಯಲ್ಲಿ ೧ ಸಾವಿರದ ೫೦೦ ಕೋಟಿ ರೂಪಾಯಿ ಮೊತ್ತದ ವಿವಿಧ ೨೦ ಯೋಜನೆಗಳಿಗೂ ಸಚಿವರು ಇಂದು ಚಾಲನೆ ನೀಡಲಿದ್ದಾರೆ.

**<><><><>**

ರಾಜ್ಯದ ವಿಜಯಪುರ, ಬೆಳಗಾವಿ, ಬೀದರ್ ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿರುವ ಸೂರಗೊಂಡನಕೊಪ್ಪ ರೈಲು ನಿಲ್ದಾಣಗಳನ್ನು ಸ್ಥಳೀಯ ಸಾಂಸ್ಕೃತಿಕ ಮಹತ್ತ್ವಕ್ಕೆ ಪೂರಕವಾಗಿ ಬದಲಿಸಿ, ಹೊಸ ನಾಮಕರಣ ಮಾಡಬೇಕೆಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ್ ಶಿಫಾರಸು ಮಾಡಿದ್ದು, ಈ ಸಂಬಂಧ ಕೇಂದ್ರ ಗೃಹ ಸಚಿವಾಲಯಕ್ಕೆ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ ವಿಜಯಪುರ ರೈಲು ನಿಲ್ದಾಣಕ್ಕೆ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ರೈಲು ನಿಲ್ದಾಣ ಎಂದು, ಬೆಳಗಾವಿ ನಿಲ್ದಾಣಕ್ಕೆ ಶ್ರೀ ಬಸವ ಮಹಾಸ್ವಾಮೀಜಿ, ಬೀದರ್ ನಿಲ್ದಾಣಕ್ಕೆ ಚನ್ನಬಸವ ಪಟ್ಟದ್ದೇವರು ಮತ್ತು ಸೂರಗೊಂಡನಕೊಪ್ಪ ನಿಲ್ದಾಣಕ್ಕೆ ಭಾಯಗಡ ರೈಲು ನಿಲ್ದಾಣ ಎಂಬ  ಹೊಸ ಹೆಸರುಗಳನ್ನು ಇಡಬೇಕೆಂದು ಪ್ರಸ್ತಾಪಿಸಿದ್ದಾರೆ. ಸರ್ಕಾರ ಈ ನಾಲ್ಕು ನಿಲ್ದಾಣ ಗಳಿಗೆ ಸಂತರ ಹೆಸರು ಇಡಲು ಶಿಫಾರಸು ಮಾಡಿದ್ದು, ಅದಕ್ಕೆ ಗೃಹ ಸಚಿವಾಲಯದ ಒಪ್ಪಿಗೆ ಬೇಕಾಗಿದೆ. ಹೀಗಾಗಿ ಮೂಲಸೌಕರ್ಯ ಇಲಾಖೆ ಮೂಲಕ ಪತ್ರ ರವಾನೆ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.  ಈ ನಾಲ್ಕೂ ರೈಲು ನಿಲ್ದಾಣಗಳು ನೈರುತ್ಯ ರೈಲ್ವೆಯ ಹುಬ್ಬಳ್ಳಿ ವಿಭಾಗದ ವ್ಯಾಪ್ತಿಯಲ್ಲಿವೆ.  ಈ ಶಿಫಾರಸನ್ನು ಅಂಗೀಕರಿಸಿ, ಮರುನಾಮಕರಣದ ಸಂಗತಿಯನ್ನು ಆದಷ್ಟು ಬೇಗ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಸಚಿವರು ಕೋರಿದ್ದಾರೆ.

**<><><><>**

ವಾಣಿಜ್ಯ ನಗರಿ ದಾವಣಗೆರೆಯಲ್ಲಿ ಬಂಡವಾಳ ಹೂಡಿಕೆ ಮಾಡಲು ಇಪ್ಪತ್ತಕ್ಕೂ ಅಧಿಕ ಐಟಿ. ಬಿಟಿ ಕಂಪನಿಗಳು ಆಸಕ್ತಿ ತೋರಿವೆ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ಸ್ಮಾರ್ಟ್ ಸಿಟಿ ಕಚೇರಿಯಲ್ಲಿ ನಡೆದ ಹೂಡಿಕೆದಾರರ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ವರ್ಷ ದಾವಣಗೆರೆ ಜಿಲ್ಲೆಯಲ್ಲಿ ೧೦ ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಪದವಿ ಪಡೆದು ಹೊರಬರುತ್ತಿದ್ದಾರೆ. ಅವರಿಗೆ ಉದ್ಯೋಗಾವಕಾಶಗಳನ್ನು ಸೃಜಿಸುವ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆಯತ್ತ ಕಂಪನಿಗಳನ್ನು ಕರೆತರುವ ಉದ್ದೇಶ ಹೊಂದಲಾಗಿದೆ ಎಂದು ಹೇಳಿದ್ದಾರೆ. ಅಮೆರಿಕಾ ಸೇರಿದಂತೆ ದೇಶ, ವಿದೇಶಗಳ ೨೦ ಕ್ಕೂ ಅಧಿಕ ಕಂಪನಿಗಳು ಟೆಕ್ ರೈಸ್ ಸಭೆಯಲ್ಲಿ ಭಾಗವಹಿಸಿ ಹೂಡಿಕೆ ಮಾಡಲು ಆಸಕ್ತಿ ತೋರಿವೆ ಎಂದು ಮಾಹಿತಿ ನೀಡಿದ್ದಾರೆ.

**ಧ್ವನಿ: ಪ್ರಭಾ ಮಲ್ಲಿಕಾರ್ಜುನ್ ( ೩೮  ಸೆಕೆಂಡ್ಸ್)**

**<><><><>**

ಇಂದಿನಿಂದ ಇದೇ ೧೮ ರವರೆಗೆ ಐದು ದಿನಗಳ ಕಾಲ ನಗರದ ಬಳ್ಳಾರಿ ಜಿಲ್ಲಾ ಕ್ರೀಡಾಂಗಣದಲ್ಲಿ  ಅಗ್ನಿವೀರ್ ನೇಮಕಾತಿ ರ್‍ಯಾಲಿ ನಡೆಯುತ್ತಿದೆ. ರಾಜ್ಯದ ೧೪ ಜಿಲ್ಲೆಗಳ ಯುವಕರು ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದಾರೆ. ಭಾರತೀಯ ಸೇನೆಯಲ್ಲಿ ಖಾಲಿ ಇರುವ ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಅಗ್ನಿವೀರ್ ಕ್ಲರ್ಕ್, ಸ್ಟೋರ್ ಕೀಪರ್ ಟೆಕ್ನಿಕಲ್, ಅಗ್ನಿವೀರ್  ಟ್ರೇಡ್ಸ್ ಮೆನ್ ಹುದ್ದೆಗಳಿಗೆ ನೇಮಕಾತಿ ನಡೆಯುತ್ತಿದೆ.  ಆನ್‌ಲೈನ್ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದವರಿಗೆ ದೈಹಿಕ ಪರೀಕ್ಷೆ  ಹಮ್ಮಿಕೊಳ್ಳಲಾಗಿದೆ. ಬಳ್ಳಾರಿ, ವಿಜಯನಗರ,  ಚಿತ್ರದುರ್ಗ,

ಬೆಂಗಳೂರು ನಗರ, ಬೆಂಗಳೂರು ಗ್ರಾಮೀಣ, ಕೋಲಾರ, ಚಾಮರಾಜನಗರ ಚಿಕ್ಕಬಳ್ಳಾಪುರ, ರಾಮನಗರ, ಕೊಡುಗು, ಮಂಡ್ಯ, ಮೈಸೂರು, ಹಾಸನ ಜಿಲ್ಲೆಗಳ ಅಭ್ಯರ್ಥಿಗಳು ಪಾಲ್ಗೊಂಡಿದ್ದಾರೆ. ದೈಹಿಕ ಪರೀಕ್ಷೆಯಲ್ಲಿ ಅರ್ಹತೆ ಪಡೆದವರಿಗೆ ನಾಳೆ ದಾಖಲೆಗಳ ಪರಿಶೀಲನೆ, ವೈದ್ಯಕೀಯ ಪರೀಕ್ಷೆ ನಡೆಯಲಿದೆ ಎಂದು ಸೇನಾ ನೇಮಕಾತಿ ವಿಭಾಗದ ನಿರ್ದೇಶಕ ಕರ್ನಲ್ ವಿವೇಕ್ ಜಮ್ದಾರ್ ಮಾಹಿತಿ ನೀಡಿದ್ದಾರೆ.

<><><><>

ರಾಯಚೂರಿನಲ್ಲಿ ನಡೆದ ಯೋನೆಕ್ಸ್ ಸನ್‌ರೈಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ೧೧ ವರ್ಷ ವಯೋಮಾನದ ವಿಭಾಗದಲ್ಲಿ ಶ್ರೀಯಾ ಎ ರಾವ್ ಡಬಲ್ಸ್ ಮತ್ತು ಸಿಂಗಲ್ಸ್ ಫೈನಲ್ ಪಂದ್ಯದಲ್ಲಿಂದು ಜಯ ಗಳಿಸಿದ್ದಾರೆ. ಸಿಂಗಲ್ಸ್ ಫೈನಲ್ಸ್ ಪಂದ್ಯದಲ್ಲಿ ಗೌರಿ ಸಂತೋಷ್ ಅವರನ್ನು ೨೧-೧೨, ೨೧-೯ ಸೆಟ್‌ಗಳಿಂದ ಸೋಲಿಸಿದ್ದಾರೆ. ಹಾಗೂ ಡಬಲ್ಸ್‌ನಲ್ಲಿ ನಿಹಾರಿಕಾ ರಾಜ್ ಅವರೊಂದಿಗೆ ರಾಜೇಶ್ ಕುಮಾರ್ ಹಾಗೂ ಖುಷಿ ಅವರನ್ನು ಮಣಿಸಿದ್ದಾರೆ.

<><><><>

ಪೆಟ್ರೋಲ್ ಬೆಲೆ ಏರಿಕೆ ಪ್ರಸ್ತಾಪದ ವಿರುದ್ಧ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಇದು ರಾಜ್ಯ ಸರ್ಕಾರದ ದುರಾಡಳಿತ, ಅಸಮರ್ಥತೆಗೆ ಸಾಕ್ಷಿ ಎಂದು ಹೇಳಿದ್ದಾರೆ. ಕಳೆದ ಎರಡೂವರೆ ವರ್ಷಗಳಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಡೀಸೆಲ್ ಬೆಲೆ ೫ ರೂಪಾಯಿ ೫೦ ಪೈಸೆ ಹಾಗೂ ಪೆಟ್ರೋಲ್ ಬೆಲೆ ೩ ರೂಪಾಯಿ ಹೆಚ್ಚಳ ಮಾಡಿ ಜನರ ಮೇಲೆ ಹೊರೆ ಹೊರಿಸಲಾಗಿದೆ ಎಂದು ದೂರಿದ್ದಾರೆ.

<><><><>

ಮಂಡ್ಯ ಜಿಲ್ಲೆಯಲ್ಲಿ ಪೌರಕಾರ್ಮಿಕ ಗೃಹ ಭಾಗ್ಯ ಯೋಜನೆಯಡಿ ೧೭೮ ಮನೆಗಳ ನಿರ್ಮಾಣಕ್ಕೆ ಅನುಮೋದನೆ ದೊರೆತಿದ್ದು, ಈವರೆಗೆ ೧೪೨ ಮನೆಗಳನ್ನು ನಿರ್ಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪುರಸಭೆ ವ್ಯಾಪ್ತಿಯಲ್ಲಿ ಕೆ.ಎಂ.ಎಫ್ ಮಳಿಗೆಗಳನ್ನು ತೆರೆಯಲು ಸೂಕ್ತ ಜಾಗ ಗುರುತಿಸಬೇಕು. ಘನ ತ್ಯಾಜ್ಯ ವಿಲೇವಾರಿಯನ್ನು ಸಮರ್ಪಕವಾಗಿ ಮಾಡಬೇಕು ಎಂದು ಸೂಚಿಸಿದ್ದಾರೆ.

**<><><><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><><><>**

**<><><><> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <><><><>**